ವಾರ್ಡ್ ಮಟ್ಟದ ಲೋಕೋಪಯೋಗಿ ಕಾಮಗಾರಿ, ನಗರ ಯೋಜನೆ ಹಾಗೂ ಮೂಲ ಸೌಕರ್ಯ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ: 28-03-2023ರ ನಡವಳಿಗಳು

ವಿಷಯದ ಸಂಖ್ಯೆ:543/2022-23

ಪ್ರಸ್ತಾವನೆ:

ಟಿಪ್ಪಣಿಯಲ್ಲಿ ವಿವರಿಸಿರುವಂತೆ, 2022-23ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ ಪಿ-3075 ಅಡಿಯಲಿ Improvements of pathway and grill fencing to Rajiv Gandhi park in ward no-05 ಅಂದಾಜು ಮೊತ್ತ ರೂ:200.00 ಲಕ್ಷಗಳಿಗೆ ನೀಡಲಾಗಿರುತ್ತದೆ. ಸದರಿ ಕಾಮಗಾರಿಗಳನ್ನು ಕೈಗೊಳ್ಳಲು ಅಂದಾಜು ಪಟ್ಟಿಯನ್ನು 2021-22ನೇ ಸಾಲಿನ ಲೋಕೋಪಯೋಗಿ ಇಲಾಖೆಯ ಎಸ್.ಆರ್ ಹಾಗೂ ಅನುಮೋದಿತ ದರಪಟ್ಟಿಯಂತೆ ತಯಾರಿಸಲಾಗಿದೆ. ಸದರಿ ಕಾಮಗಾರಿಯನ್ನು ಸಾರ್ವಜನಿಕ ಸೇವಾ ಹಿತದೃಷ್ಟಿಯಿಂದ ತುರ್ತಾಗಿ ಕೈಗೊಳ್ಳಬೇಕಾಗಿದ್ದರಿಂದ ಸಕ್ಷಮ ಪ್ರಾಧಿಕಾರದಿಂದ ಆಡಳಿತಾತ್ಮಕ ಮಂಜೂರಾತಿಯನ್ನು ನಿರೀಕ್ಷಿಸಿ ಕಾರ್ಯಪಾಲಕ ಅಭಿಯಂತರರು, ಯಲಹಂಕ ವಿಭಾಗರವರು ದಿನಾಂಕ:08-03-2023 ರಂದು ಟೆಂಡರ್ ಆಹ್ವಾನಿಸಲಾಗಿತ್ತು.

ತಾಂತ್ರಿಕ ಬಿಡ್‌ನ್ನು ದಿನಾಂಕ:20-03-2023ರಂದು ತೆರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ ಇಬ್ಬರು ಬಿಡ್‌ದಾರರಾದ Sri.G Venkate Gowda ಮತ್ತು Sri.B B Umesha (SMLP Asphalts) ರವರು ಭಾಗವಹಿಸಿದ್ದು, ಇಬ್ಬರು ಬಿಡ್‌ದಾರರ ಆರ್ಥಿಕ ಬಿಡ್ ತೆರೆಯಲು ಮುಖ್ಯ ಅಭಿಯಂತರರು ಯಲಹಂಕ ವಲಯರವರು ಅನುಮೋದಿಸಿರುವಂತೆ ಆರ್ಥಿಕ ಬಿಡ್‌ನ್ನು ತೆರೆಯಲಾಗಿದ್ದು, ವಿವರ ಕೆಳಕಂಡಂತೆ ಇರುತ್ತದೆ.

ಕ್ರ ಸಂ	ಗುತ್ತಿಗೆದಾರರ ಹೆಸರು	ಟೆಂಡರ್‌ಗಿಟ್ಟ ಮೊತ್ತ (ರೂ.ಗಳಲ್ಲಿ) 2021-22ರ ಅನುಮೋದಿತ ದರಗಳಿಗೆ ಹಾಗೂ ದಿನಾಂಕ: 04-01-2023ರ ಪರಿಷ್ಕೃತ ದರಗಳಿಗೆ ಹೋಲಿಸಿದಾಗ	ಗುತ್ತಿಗೆದಾರರು ನಮೂದಿಸಿದ ಮೊತ್ತ (ರೂ.ಗಳಲ್ಲಿ)	2021-22ನೇ ಸಾಲಿನ ಎಸ್.ಆರ್ ದರಗಳಿಗೆ ಹಾಗೂ ದಿ:04-01-2023ರ ಪರಿಷ್ಕೃತ ದರಗಳಿಗೆ ಹೋಲಿಸಿದಾಗ ಶೇಕಡವಾರು	ಷರಾ
1	Sri. G Venkate Gowda	1,66,06,798.15	17105005.06	3.00% ಹೆಚ್ಚು	ಎಲ್-1
2	Sri. B B Umesha (SMLP Asphalts)		17852324.46	7.50% ಹೆಚ್ಚು	ಎಲ್-2

ಮುಖ್ಯ ಅಭಿಯಂತರರು ಸೂಚಿಸಿರುವಂತೆ ಗುತ್ತಿಗೆದಾರರೊಂದಿಗೆ ದರ ಸಂಧಾನ ನಡೆಸಲು ಪತ್ರ ನೀಡಿದ್ದು, ಗುತ್ತಿಗೆದಾರರಾದ ಶ್ರೀ.ಜಿ.ವೆಂಕಟಿಗೌಡ ರವರು ದಿನಾಂಕ:24-03-2023 ರಂದು ಪತ್ರ ನೀಡಿದ್ದು ವಿವರ ಕೆಳಕಂಡಂತಿದೆ.

ಕ್ರ ಸಂ	ಬಿಡ್‌ದಾರರ ಹೆಸರು	ಟೆಂಡರ್‌ಗಿಟ್ಟ ಮೊತ್ತ (ರೂ.ಗಳಲ್ಲಿ) 2021–22ರ ಎಸ್.ಆರ್, ಅನುಮೋದಿತ ದರಗಳು ಹಾಗೂ ದಿನಾಂಕ: 04–01–2023ರ ಪರಿಷ್ಕೃತ ದರಗಳಿಗೆ ಹೋಲಿಸಿದಾಗ	ಗುತ್ತಿಗೆದಾರರು ನಮೂದಿಸಿದ ಮೊತ್ತ	ಶೇಕಡ ವಾರು	ಗುತ್ತಿಗೆದಾರರು ನೀಡಿರುವ ದರ ಸಂಧಾನ ಮೊತ್ತ	ಶೇಕಡ ವಾರು
1	Sri. G Venkate Gowda	1,66,06,798.15	1,71,05,005.06	3.00% ಹೆಚ್ಚು	1,70,88,395.30	2.90% ಹೆಚ್ಚು

ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿದೆ.

1. ಪ್ರಸ್ತಾಪಿತ ಕಾಮಗಾರಿಗಳ ಸ್ಥಳ ಪರಿವೀಕ್ಷಣೆ ಮಾಡಿ ಕಾಮಗಾರಿಯ ಅವಶ್ಯಕತೆ ಬಗ್ಗೆ ಹಾಗೂ ಸದರಿ ಕಾಮಗಾರಿಯನ್ನು ಪಾಲಿಕೆಯ ಹಿಂದಿನ ಆಯವ್ಯಯಗಳಲ್ಲಿ/ ಅನುದಾನಗಳಲ್ಲಿ ಕೈಗೊಂಡಿಲ್ಲದೆ ಇರುವ ಮತ್ತು ಪುನಾರಾವರ್ತನೆಯಾಗದೇ ಇರುವುದನ್ನು ಖಚಿತ ಪಡಿಸಿಕೊಳ್ಳುವುದು.
2. ಕಾಮಗಾರಿಯನ್ನು ಅನುಷ್ಠಾನಗೊಳಿಸುವ ಪೂರ್ವದಲ್ಲಿ ಆಯುಕ್ತರವರ ಕಛೇರಿ ಆದೇಶ ಸಂಖ್ಯೆ:ಮುಲೆಅ/ಆಯವ್ಯ/2019–20/ಪಿಆರ್/11/2018–19 ದಿನಾಂಕ:12–06–2019 ಮತ್ತು ಆಯುಕ್ತರವರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ:ಬಿಬಿಎಂಪಿ/ಆ/ಪಿ.ಆರ್/5287/2019–20, ದಿನಾಂಕ:05–11–2019 ಮತ್ತು ಬಿಬಿಎಂಪಿ/ಪಿ/ಪಿಆರ್/6166/2019–20, ದಿನಾಂಕ:13–12–2019 ರಲ್ಲಿನ ನಿರ್ದೇಶನಗಳನ್ನು/ಪ್ರಕ್ರಿಯೆಗಳನ್ನು ಅನುಸರಿಸತಕ್ಕದ್ದು.
3. ಕಾಮಗಾರಿಗೂ ಮುನ್ನ ಹಾಗೂ ನಂತರದ ಜಿಪಿಎಸ್‌ಯುಳ್ಳ ಛಾಯಾ ಚಿತ್ರಗಳನ್ನು ಸಲ್ಲಿಸತಕ್ಕದ್ದು.

ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಕಾಮಗಾರಿಯ ಅಂದಾಜು ಮೊತ್ತ ರೂ:200.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಿ ಟೆಂಡರ್ ಆಹ್ವಾನಿಸಲಾಗಿರುವುದರಿಂದ ಘಟನೋತ್ತರ ಆಡಳಿತಾತ್ಮಕ ಅನುಮೋದನೆ. ಹಾಗೂ ಕಾಮಗಾರಿಯನ್ನು ಸಾರ್ವಜನಿಕರ ಸೇವಾ ಹಿತದೃಷ್ಟಿಯಿಂದ ತುರ್ತಾಗಿ ಕೈಗೊಳ್ಳಬೇಕಾಗಿರುವುದರಿಂದ ಗುತ್ತಿಗೆದಾರರಾದ Sri. G Venkate Gowda ರವರು ದರ ಸಂಧಾನಿತ ಮೊತ್ತವಾದ ರೂ:1,70,88,395.30 ಗಳಿಗೆ ಟೆಂಡರ್ ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇ.2.90% ರಷ್ಟು ಅಧಿಕ ಟೆಂಡರ್ ಪ್ರೀಮಿಯಂಗೆ (2021–22ನೇ ಸಾಲಿನ ದರಪಟ್ಟಿ) ಅನುಮೋದನೆ ನೀಡಲು ಕೋರುತ್ತಾ, ವಾರ್ಡ್ ಮಟ್ಟದ ಲೋಕೋಪಯೋಗಿ ಕಾಮಗಾರಿ, ನಗರ ಯೋಜನೆ ಹಾಗೂ ಮೂಲ ಸೌಕರ್ಯ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಜಲಾಯಿಸಿ ತೀರ್ಮಾನಿಸ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ವಿಶೇಷ ಆಯುಕ್ತರು (ಯೋಜನೆ) ರವರ ದಿನಾಂಕ:28–03–2023ರ ಟಿಪ್ಪಣಿ.

ತೀರ್ಮಾನ: ವಿಶೇಷ ಆಯುಕ್ತರು (ಯೋಜನೆ) ರವರ ದಿನಾಂಕ:28–03–2023ರ ಟಿಪ್ಪಣಿಯನ್ನು ಒಪ್ಪಿದೆ.

(ರಾಕೇಶ್ ಸಿಂಗ್)
ಆಡಳಿತಗಾರರು